# ಜಿಲ್ಲಾ ಆರೋಗ್ಯ ಇಲಾಖೆಯಿಂದ ವಿ ಡಿ ಐ ಟಿ ಗೆ ಸನ್ಮಾನ



**ಕರಾವಳಿ ಮುಂಜಾವು ವರದಿ**

**ಹಳಿಯಾಳ:** ವಿಶ್ವ ಏಡ್ಸ್ ದಿನದ ಪ್ರಯುಕ್ತ ಉತ್ತರ ಕನ್ನಡ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಕಾರವಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಾರವಾರ ಡಿಸೆಂಬರ್ 1 ರಂದು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೆ ಎಲ್ ಎಸ್ ವಿ ಡಿ ಐ ಟಿ ಮಹಾವಿದ್ಯಾಲಯ ಹಳಿಯಾಳ ವನ್ನು ಸನ್ಮಾನಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳ ಕಚೇರಿ ಸಭಾಭವನ ಕಾರವಾರದಲ್ಲಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ರೆಡ್ ರಿಬ್ಬನ್ ಕ್ಲಬ್ ಗಳ ಮೂಲಕ ಏಡ್ಸ್ ನಿಯಂತ್ರಣ ಮತ್ತು ರಕ್ತದಾನ ಕುರಿತು ಉತ್ತಮ ಕಾರ್ಯ ಮಾಡುತ್ತಿರುವ ಕಾರಣಕ್ಕೆ ಹಾಗೂ ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ನಡೆಸಿ ನಿಗದಿತ ಸಮಯದಲ್ಲಿ ವರದಿಗಳನ್ನು ನೀಡುತ್ತಿರುವುದರಿಂದ ಮಹಾವಿದ್ಯಾಲಯದ ಗೌರವ ಒದಗಿದೆ. ಡಾ. ಧನಕರ್ ರಾವ್ ಜಿಲ್ಲಾ ಕುಷ್ಟರೋಗ ಅಧಿಕಾರಿ, ಡಾ. ರಮೇಶ್ ರಾವ್ ವೇಕ್ಟರ್ ಬೋರ್ನೆ, ಶ್ರೀ. ವಿ ಎಂ ಹೆಗಡೆ ಕಾರ್ಯದರ್ಶಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಡಾ. ಹರ್ಷ ವೆಂಕಟೇಶ್ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಹಾಗೂ ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣ ಅಧಿಕಾರಿಗಳು, ಡಾ. ನಟರಾಜ್ ಜಿಲ್ಲಾ ಆರ್ ಸಿ ಎಚ್ ಅಧಿಕಾರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕಾರವಾರ ಇವರುಗಳು ಹಾಜರಿದ್ದರು. ಮಹಾವಿದ್ಯಾಲಯದ ಶೈಕ್ಷಣಿಕ ವಿಭಾಗದ ಡೀನ್ ಪ್ರೊ. ಪೂರ್ಣಿಮಾ ರಾಯ್ಕರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿಹೋಳಿ ವಿ ಡಿ ಐ ಟಿ ಯನ್ನು ಪ್ರತಿನಿಧಿಸಿದ್ದರು. ಮಹಾವಿದ್ಯಾಲಯದ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಜಿಲ್ಲಾ ಆರೋಗ್ಯ ಮತ್ತು ಸಮಾಜ ಕಲ್ಯಾಣ ಇಲಾಖೆ ಸನ್ಮಾನಿಸಿರುವುದಕ್ಕೆ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ ಲೋಕುರ್, ಪ್ರಾಚಾರ್ಯ ಡಾ ವಿ ಎ ಕುಲಕರ್ಣಿ ಹಾಗೂ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

# ಜಿಲ್ಲಾ ಆರೋಗ್ಯ ಇಲಾಖೆಯಿಂದ ವಿಡಿಐಟಿಗೆ ಸನ್ಮಾನ



**ಹಳಿಯಾಳ:** ವಿಶ್ವ ಏಡ್ಸ್ ದಿನದ ಪ್ರಯುಕ್ತ ಉತ್ತರ ಕನ್ನಡ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ಕಾರವಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಾರವಾರ ಡಿಸೆಂಬರ್ 1 ರಂದು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೆಎಲ್ಎಸ್‌ವಿಡಿ ಐಟಿ ಮಹಾವಿದ್ಯಾಲಯ ಹಳಿಯಾಳ ವನ್ನು ಸನ್ಮಾನಿಸಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಗಳ ಕಚೇರಿ ಸಭಾಭವನ ಕಾರವಾರದಲ್ಲಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ರೆಡ್ ರಿಬ್ಬನ್ ಕ್ಲಬ್ ಗಳ ಮೂಲಕ ಏಡ್ಸ್ ನಿಯಂತ್ರಣ ಮತ್ತು ರಕ್ತದಾನ ಕುರಿತು ಉತ್ತಮ ಕಾರ್ಯ ಮಾಡುತ್ತಿರುವ ಸಲುವಾಗಿ ಹಾಗೂ ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ನಡೆಸಿ ನಿಗದಿತ ಸಮಯದಲ್ಲಿ ವರದಿಗಳನ್ನು ನೀಡುತ್ತಿರುವುದರಿಂದ ಮಹಾವಿದ್ಯಾಲಯವನ್ನು ಸನ್ಮಾನಿಸಲಾಯಿತು.

ಡಾ. ಧನಕರ್ ರಾವ್ ಜಿಲ್ಲಾ ಕುಷ್ಟರೋಗ ಅಧಿಕಾರಿ, ಡಾ. ರಮೇಶ್ ರಾವ್ ವೇಕ್ಟರ್ ಬೊರ್ನೆ ಅಧಿಕಾರಿ, ವಿ.ಎಂ. ಹೆಗಡೆ ಕಾರ್ಯದರ್ಶಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಡಾ. ಹರ್ಷ ವೆಂಕಟೇಶ್ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಹಾಗೂ ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣ ಅಧಿಕಾರಿಗಳು, ಡಾ. ನಟರಾಜ್ ಜಿಲ್ಲಾ ಆರ್‌ಸಿಎಚ್ ಅಧಿಕಾರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕಾರವಾರ ಇವರುಗಳು ಸನ್ಮಾನ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು.

ಮಹಾವಿದ್ಯಾಲಯದ ಶೈಕ್ಷಣಿಕ ವಿಭಾಗದ ಡೀನ್ ಪ್ರೊ. ಪೂರ್ಣಿಮಾ ರಾಯ್ಕರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿಹೋಳಿ ವಿಡಿಐಟಿಯನ್ನು ಪ್ರತಿನಿಧಿಸಿದ್ದರು. ಮಹಾವಿದ್ಯಾಲಯದ ಸಮಾಜಮುಖಿ ಕಾರ್ಯಗಳನ್ನು ಗುರುತಿಸಿ ಜಿಲ್ಲಾ ಆರೋಗ್ಯ ಮತ್ತು ಸಮಾಜ ಕಲ್ಯಾಣ ಇಲಾಖೆ ಸನ್ಮಾನಿಸಿರುವುದಕ್ಕೆ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ ಲೋಕುರ್, ಪ್ರಾಚಾರ್ಯ ಡಾ.ವಿ.ಎ. ಕುಲಕರ್ಣಿ ಹಾಗೂ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.